ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 6–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | 7ನೇ ಬೆಂಗಳೂರು ಅಂತರಾಷ್ಟ್ರೀಯ ಚಿತ್ರೋತ್ಸವದಲ್ಲಿ ಪಾಲ್ಗೊಂಡಿರುವ ರಾಷ್ಟ್ರೀಯ ಚಲನಚಿತ್ರ ನಿರ್ದೇಶಕರು ಹಾಗೂ ಅತಿಥಿಗಳಾದ ದೀಪ್ತಿ ಡಾ ಕುನ್ಹ ಮತ್ತು ಇಟಲೋ ಸ್ಪಿನೆಲಿ ಅವರಿಂದ ಪತ್ರಿಕಾಗೋಷ್ಠಿ<br>(ಏಳನೇ ಬೆಂಗಳೂರು ಅಂತರಾಷ್ಟ್ರೀಯ ಚಿತ್ರೋತ್ಸವದಲ್ಲಿ ಕನ್ನಡ ಚಿತ್ರಗಳ ಮಾರುಕಟ್ಟೆ ಸಂಬಂಧಿಸಿದಂತೆ) | 7–12–2014 ಭಾನುವಾರ ಮಧ್ಯಾಹ್ನ 12–00 ಗಂಟೆಗೆ | ವಾರ್ತಾ ಸಭಾಂಗಣ, ನೆಲ ಮಹಡಿ ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001 |

ನಿರ್ದೇಶಕರ ಪರವಾಗಿ

## ಮಾಧ್ಯಮದವರ ಗಮನಕ್ಕೆ

ಭಾರತದ ಘನತೆವೆತ್ತ ರಾಷ್ಟ್ರಪತಿ ಶ್ರೀ ಪ್ರಣವ್ ಮುಖರ್ಜಿ ಅವರು ಡಿಸೆಂಬರ್ 8 ರಂದು ಅಂತರ ರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರದಲ್ಲಿ ಪಾಲ್ಗೊಳ್ಳಲಿರುವ ಇ ಆಡಳಿತ ಸೇವೆಯ ಉದ್ಘಾಟನಾ ಸಮಾರಂಭದ ವರದಿಗಾಗಿ ತೆರಳ ಬಯಸುವ ***ಮಾನ್ಯತೆ ಪಡೆದ*** ಮಾಧ್ಯಮ ಪ್ರತಿನಿಧಿಗಳು ರಹದಾರಿ ಪತ್ರಗಳನ್ನು ಮಿಲ್ಲರ್ಸ್ ರಸ್ತೆಯಲ್ಲಿರುವ, ಬೆಂಗಳೂರು ಜಿಲ್ಲಾ ಪೋಲೀಸ್ ಅಧೀಕ್ಷಕರ ಕಚೇರಿಯಿಂದ ಪಡೆದುಕೊಳ್ಳಬಹುದು.

ರಹದಾರಿ ಪತ್ರಗಳನ್ನು ಇಂದು ಮಧ್ಯಾಹ್ನ 2.00 ಗಂಟೆಯಿಂದ 6.00 ಗಂಟೆಯವರೆಗೆ, *ಡಿಸೆಂಬರ್ 7 ರಂದು ಬೆಳಿಗ್ಗೆ 11–00 ಗಂಟೆಯಿಂದ 12–00 ಗಂಟೆಯ ವರೆಗೆ*

ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಪೊಲೀಸ್ ಇನ್ಸ್‌ಪೆಕ್ಟರ್ ಶ್ರೀ ಬಸವೇಶ್ ಅವರನ್ನು ದೂರವಾಣಿ ಸಂಖ್ಯೆ: 9480802407 ಅಥವಾ 080- 22352466 ಮೂಲಕ ಸಂಪರ್ಕಿಸಬಹುದು.

ಸಮ/ಬಿಜಿಪಿ/ಕೆಎಂ

**ಪತ್ರಿಕಾ ಪ್ರಕಟಣೆ**

# ಮಕ್ಕಳ ಸುರಕ್ಷತಾ ನೀತಿ ಜಾರಿಗೆ ಸಚಿವ ಸಂಪುಟ ಒಪ್ಪಿಗೆ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿನ ಸರ್ಕಾರಿ ಅನುದಾನಿತ ಶಾಲೆಗಳು ಹಾಗೂ ಖಾಸಗಿ ಶಾಲೆಗಳು ಮಕ್ಕಳಿಗೆ ಸುರಕ್ಷತೆ ಒದಗಿಸಲು ಮಕ್ಕಳ ಸುರಕ್ಷತಾ ನೀತಿ ಜಾರಿಗೆ ತರಲು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಯಿತು ಎಂದು ಕಾನೂನು ಸಚಿವ ಶ್ರೀ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ಇಂದು ನಡೆದ ಸಚಿವ ಸಂಪುಟ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ 58.6 ಕೋಟಿ ರೂ. ವೆಚ್ಚದಲ್ಲಿ ಉದ್ಯೋಗ ಕಲ್ಪಿಸುವ ದೃಷ್ಟಿಯಿಂದ ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿತು ಎಂದು ಅವರು ತಿಳಿಸಿದರು.

**ಸಚಿವ ಸಂಪುಟ ಸಭೆಯ ಇತರ ತೀರ್ಮಾನಗಳು:**

ರಾಜ್ಯದಲ್ಲಿ ನಾಲ್ಕನೇ ಹಣಕಾಸು ಆಯೋಗ ರಚನೆಗೆ ಸಚಿವ ಸಂಪುಟ ಒಪ್ಪಿಗೆ. ಆಯೋಗದಲ್ಲಿ ಒಬ್ಬರು ಅಧ್ಯಕ್ಷರು ಹಾಗೂ ಇಬ್ಬರು ಸದಸ್ಯರಿರುತ್ತಾರೆ.

ಸುಮಾರು 15 ಕೋಟಿ ವೆಚ್ಚದಲ್ಲಿ ಕಡೂರು, ಚಿಕ್ಕಮಗಳೂರು ಸಕಲೇಶಪುರ ರೈಲ್ವೆ ಮಾರ್ಗದ ಸರಸ್ವತಿಪುರ ಮಾರ್ಗದ ಮೇಲು ಸೇತುವೆ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ.

ಕರ್ನಾಟಕ ಕಾರ್ಮಿಕ ಸಂಸ್ಥೆಗೆ ಬಾಗಲಕುಂಟೆಯಲ್ಲಿ ಎರಡು ಎಕರೆ ಪ್ರದೇಶದಲ್ಲಿ 12.60 ಕೋಟಿ ಅಂದಾಜು ವೆಚ್ಚದಲ್ಲಿ ಗೃಹ ಮಂಡಳಿ ನಿರ್ಮಿಸುವ ಕಟ್ಟಡಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಕರ್ನಾಟಕ ನ್ಯಾಯಾಂಗ ಸೇವೆ ನಿಯಮಾವಳಿಗಳ ನೇಮಕಾತಿಗೆ ತಿದ್ದುಪಡಿ ತರಲು ತೀರ್ಮಾನ. ಸಾರ್ವಜನಿಕ ವಲಯಗಳಡಿ ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸುವ ರಾಜ್ಯ ಹೆದ್ದಾರಿಗಳಲ್ಲಿ ರಸ್ತೆ ಬಳಕೆ ಶುಲ್ಕ ನಿಯಮ 2014ಕ್ಕೆ ಅನುಮೋದನೆ.

ಗದಗ್‌ನಲ್ಲಿ 756 ಲಕ್ಷ ವೆಚ್ಚದಲ್ಲಿ ಜಿಲ್ಲಾ ನ್ಯಾಯಾಲಯದ ಮೊದಲನೇ ಮಹಡಿ ಕಟ್ಟಡ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಮೈಸೂರಿನ ಜಲದರ್ಶಿನಿ ಅತಿಥಿಗೃಹ ಆವರಣದಲ್ಲಿ 67 ಲಕ್ಷ ಅಂದಾಜು ವೆಚ್ಚದಲ್ಲಿ ಅತಿ ಗಣ್ಯ ವ್ಯಕ್ತಿಗಳು ತಂಗಲು ಕೊಠಡಿ ನಿರ್ಮಾಣ ಪ್ರಕ್ರಿಯೆಗೆ ಒಪ್ಪಿಗೆ.

ಕಾಡುಗೊಲ್ಲ, ಹಟ್ಟಿಗೊಲ್ಲ, ಅಡವಿಗೊಲ್ಲ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಉತ್ತರ ಕನ್ನಡ ಜಿಲ್ಲೆ ಜೋಯಿಡಾ ತಾಲ್ಲೂಕಿನ ರಾಮನಗರದಲ್ಲಿ 10.67 ಕೋಟಿ ರೂ. ವೆಚ್ಚದಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲಾ ಸಂಕೀರ್ಣ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಬೆಂಗಳೂರು ಜಿಲ್ಲೆ ದೇವನಹಳ್ಳಿ ತಾಲ್ಲೂಕು ಕುಂದಾಣದಲ್ಲಿ 9.53 ಕೋಟಿ ರೂ. ವೆಚ್ಚದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ.

ಹಳಿಯಾಳ ಹಾಗೂ ಪಿರಿಯಾಪಟ್ಟ ಪಟ್ಟಣ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಉನ್ನತೀಕರಿಸಲು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ

ಚಿತ್ರದುರ್ಗ ಜಿಲ್ಲೆಯ ದ್ಯಾಮವ್ವನ ಹಳ್ಳಿ ಹಾಗೂ ಚಳ್ಳಕೆರೆ ತಾಲ್ಲೂಕಿನ ಬಾಲೇನಹಳ್ಳಿ ಗ್ರಾಮದ ಬಳಿ ಪವನ ವಿದ್ಯುತ್ ಸ್ಥಾವರ ಸ್ಥಾಪನೆಗೆ ಭೂಮಿಯನ್ನು ಗುತ್ತಿಗೆ ಆಧಾರದಲ್ಲಿ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿತು. ಆಶ್ರಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ರಾಜೀವ ಗಾಂಧಿ ವಸತಿ ನಿಗಮ ವತಿಯಿಂದ ಉಚಿತ ನಿವೇಶನ ನೀಡಲು ಒಪ್ಪಿಗೆ.

ಬೆಂಗಳೂರಿನ ಹೆಬ್ಬಾಳದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ಭವನ ನಿರ್ಮಾಣ, ಕಂಟೋನ್ಮೆಂಟ್ ಬಳಿ 6.5 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ, ಗುಲ್ಬರ್ಗಾ ತುಮಕೂರು ಹಾಗೂ ಬೆಳಗಾವಿಗಳಲ್ಲಿ 13.6 ಕೋಟಿ ವೆಚ್ಚದಲ್ಲಿ ಪಶು ಆಸ್ಪತ್ರೆ ನಿರ್ಮಾಣಕ್ಕೆ ಒಪ್ಪಿಗೆ. ಈ ಕಟ್ಟಡಗಳನ್ನು ಗೃಹ ಮಂಡಳಿ ನಿರ್ಮಾಣ ಮಾಡಲು ತೀರ್ಮಾನ.

ಸಮ/

# ಸಮಾಜಕ್ಕೆ ಮನವೀಯ ಮೌಲ್ಯಗಳನ್ನು ನೀಡಿದ ಸಾಹಿತಿ: ಕುವೆಂಪು

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಸಾಹಿತ್ಯದಲ್ಲಿ ಮಾನವೀಯ ಮೌಲ್ಯಗಳಿದ್ದಾಗ ಮಾತ್ರ ಸಮಾಜಕ್ಕೆ ಅನುಕೂಲವಾಗಲಿದೆ. ಅಂತಹ ಸಾಹಿತ್ಯವನ್ನು ರಾಷ್ಟ್ರಕವಿ ಕುವೆಂಪು ಅವರು ನೀಡಿದ್ದಾರೆಂದು ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ರಾಷ್ಟ್ರಕವಿ ಕುವೆಂಪು ಪ್ರತಿಷ್ಠಾನ(ರಿ) ಕುಪ್ಪಳಿವತಿಯಿಂದ ಹೊರ ತಂದಿರುವ ಕುವೆಂಪು ಚಿತ್ರ ಸಂಪುಟವನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು ಕುವೆಂಪು 20 ನೇ ಶತಮಾನದ ಒಬ್ಬ ಮಹಾ ಕವಿ ಅವರು ಕವಿ ಅಷ್ಟೆ ಅಲ್ಲ ದಾರ್ಶನಿಕ ಕೂಡ ಆಗಿದ್ದರು. ಅವರ ಕವಿತೆ, ಕಾದಂಬರಿ, ನಾಟಕಗಳು ಸಮಾಜಕ್ಕೆ ವೈಚಾರಿಕ, ವೈಜ್ಞಾನಿಕ ನೆಲೆಗಟ್ಟನ್ನು ಒದಗಿಸಿಕೊಟ್ಟಿದೆ. ಅಲ್ಲದೆ ಅವರ ಸಾಹಿತ್ಯ ಬದುಕಿಗೆ ಹತ್ತಿರ ಹಾಗೂ ವಾಸ್ತವದಿಂದ ಕೂಡಿದೆ ಎಂದರು.

ಕುವೆಂಪು ಹೆಸರಿನಲ್ಲಿ ಕಲಾಮಂದಿರ ಮಾಡಲು ಈಗಾಗಲೇ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ. ಜಾಗ ಸಿಗದ ಹಿನ್ನೆಲೆಯಲ್ಲಿ ಹಣವನ್ನು ಬಿಡುಗಡೆ ಮಾಡಿರಲಿಲ್ಲ. ಆದರೆ ಬಿ.ಡಿ.ಎ. ಇಂದ ಜಾಗ ದೊರೆತಿರುವುದರಿಂದ ಕೂಡಲೇ ಹಣವನ್ನು ಬಿಡುಗಡೆ ಮಾಡಲಾಗುವುದು. ಕುವೆಂಪು ಅವರ ಭಾವಚಿತ್ರವುಳ್ಳ ಅಂಚೆ ಚೀಟಿ ಬಿಡುಗಡೆಗಾಗಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗುವುದೆಂದು ಅವರು ಭರವಸೆ ನೀಡಿದರು.

ಕಡಿದಾಳ್ ಪ್ರಕಾಶ್ ಅವರ ಸಾರಥ್ಯದಲ್ಲಿ ಒಂದು ಒಳ್ಳೆ ಸಂಪುಟವನ್ನು ಹೊರತಂದಿದ್ದಾರೆ. ಕುವೆಂಪು ಅವರು ಮೈಸೂರಿನವರೇ ಆಗಿದ್ದರೂ ಅವರ ಜೊತೆ ಪೋಟೋ ತೆಗೆಸಿಕೊಳ್ಳಲು ಸಾಧ್ಯವಾಗದಿದ್ದುದು ನನ್ನ ದುರ್ಭಾಗ್ಯ. ಅವರೊಂದಿಗೆ ಘೋಟೋ ತೆಗೆಸಿಕೊಂಡಿದ್ದಲ್ಲಿ ಈ ಸಂಪುಟದಲ್ಲಿ ಅವರೊಂದಿಗಿರುವ ನನ್ನ ಪೋಟೊ ಕೂಡ ಇರುತ್ತಿತ್ತೇನೋ ಎಂದು ಮುಖ್ಯಮಂತ್ರಿಗಳು ವಿಷಾಧಿಸಿದರು.

ರಾಷ್ಟ್ರಕವಿ ಕುವೆಂಪು ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀ ಹಂಪಾನಾಗರಾಜಯ್ಯ ಅವರು ಮಾತನಾಡಿ ಕುಪ್ಪಳಿಗೆ ಪ್ರತಿದಿನ 250 ರಿಂದ 300 ಸಾಹಿತ್ಯಾಸಕ್ತ ಜನರು ಭೇಟಿ ನೀಡುತ್ತಿದ್ದಾರೆ. ಮುಖ್ಯಮಂತ್ರಿಯವರೆ ಇನ್ನೂ ಇಲ್ಲಿಗೆ ಬಂದಿಲ್ಲ. ದಯಮಾಡಿ ಡಿಸೆಂಬರ್ 29 ರಂದು ನಡೆಯುವ ಕಾರ್ಯಕ್ರಮಕ್ಕೆ ಕುಪ್ಪಳಿಗೆ ಆಗಮಿಸುವಂತೆ ಅವರು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಕುವೆಂಪು ಮನೆಯವರು ಪ್ರತಿಷ್ಠಾನದಲ್ಲಿ ಠೇವಣಿಯಾಗಿಟ್ಟಿರುವ ಹಣದ ಬಡ್ಡಿ 5 ಲಕ್ಷ ರೂ.ಗಳನ್ನು ಕುವೆಂಪು ಅವರ ಹೆಸರಿನಲ್ಲಿ ಪ್ರತಿ ವರ್ಷ ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಈ ಬಾರಿ ಹಿಂದಿ ಸಾಹಿತ್ಯ ಕ್ಷೇತ್ರದ ವಿಮರ್ಶಕರಾದ ಶ್ರೀ ನಾಮವರ್‌ಸಿಂಗ್ ಅವರಿಗೆ ನೀಡಲಾಗುವುದೆಂದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಕಿಮ್ಮನೆ ರತ್ನಾಕರ್, ಆರೋಗ್ಯ ಸಚಿವರಾದ ಯು. ಟಿ. ಖಾದರ್ ಮಾಜಿ ಸಚಿವರಾದ ಡಿ. ಬಿ. ಚಂದ್ರೇಗೌಡ, ಖ್ಯಾತ ನಿರ್ದೇಶಕರಾದ ನಾಗತಿಹಳ್ಳಿ ಚಂದ್ರಶೇಖರ್, ಕುವೆಂಪು ಪ್ರತಿಷ್ಠಾನದ ಕಾರ್ಯದರ್ಶಿ ಕಡಿದಾಳ್ ಪ್ರಕಾಶ್, ಖಜಾಂಚಿ ದೇವಾಂಗಿ ಮನುದೇವ್, ಪೂರ್ಣಚಂದ್ರ ತೇಜಸ್ವಿಯವರ ಧರ್ಮಪತ್ನಿ ಶ್ರೀಮತಿ ರಾಜೇಶ್ವರಿ ತೇಜಸ್ವಿ ಸೇರಿದಂತೆ ಅವರ ಕುಟುಂಬ ಸದಸ್ಯರು ಹಾಗೂ ಮತ್ತಿತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಬಿಜಿಪಿ/ಕೆಎಂ**

## KARNATAKA COUNCIL FOR TECHNOLOGICAL UPGRADATION

Bangalore, December 6 (Karnataka Information)

Karnataka Council for Technological Upgradation is established in the year 1996 and it is a Joint venture of Government of India and Government of Karnataka. The objectives of Karnataka Council for Technological Upgradation is implementing of Industrial Development Schemes such as Enhancement of competitiveness status of MSEs, Adoption of new technology & Upgradation and Quality improvement as per Karnataka Industrial Policy.

KCTU implements the GoI and GoK financial assisted Cluster Development Scheme to set-up Common Facility Centres for adoption of modern technology to improve the quality and enhance the Global competitiveness.

Karnataka Council for Technological Upgradation under Karnataka Industrial Policy 2009-14 has sanctioned incentive of Rs. 893,500/- to 15 Industrial Units obtained ISO Certification.

The 3rd and 4th State Level Committee has sanctioned Financial Assistance to R&D Centres estimated to cost Rs.3.26 Crores to 10 Engineering & Technology Colleges for Research & Development activity says a press note issued by Anil A Uppin Managing Director Karnataka Council for Technological Upgradation.

## ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್

ಬೆಂಗಳೂರು, ಡಿ. 6 (ಕರ್ನಾಟಕ ವಾರ್ತೆ)–

ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ 1996ರಲ್ಲಿ ಸ್ಥಾಪನೆಯಾಗಿದ್ದು, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರದ ಒಂದು ಜಂಟಿ ಸಂಸ್ಥೆಯಾಗಿದೆ. ಈ ಸಂಸ್ಥೆಯ ಧ್ಯೇಯೋದ್ದೇಶಗಳಾದ ಸೂಕ್ಷ್ಮ ಮತ್ತು ಸಣ್ಣ ಉದ್ದಿಮೆಗಳಿಗೆ ಸ್ಪರ್ಧಾತ್ಮಕತೆ ವೃದ್ಧಿ, ಆಧುನಿಕ ತಂತ್ರಜ್ಞಾನ ಅಳವಡಿಕೆ, ಉನ್ನತೀಕರಣ, ವೈವಿಧ್ಯೀಕರಣ, ಉತ್ಪನ್ನಗಳ ಗುಣಮಟ್ಟ ಸುಧಾರಣೆ ಇತ್ಯಾದಿಗಳಾಗಿದ್ದು ಇದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಹಲವು ಕೈಗಾರಿಕಾಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಭಾರತ ಸರ್ಕಾರದ ಕ್ಲಷ್ಟರ್ ಅಭಿವೃದ್ಧಿ ಯೋಜನೆ ಇತ್ಯಾದಿಗಳನ್ನು ಅನುಷ್ಠಾನಗೊಳಿಸುತ್ತಿದೆ.

ಅದರಂತೆ, ಕರ್ನಾಟಕ ಕೈಗಾರಿಕಾ ನೀತಿ 2009–14 ಅಡಿಯಲ್ಲಿ ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್, 10ನೇ ರಾಜ್ಯಮಟ್ಟದ ಮಂಜೂರಾತಿ ಸಮಿತಿ ಸಭೆಯಲ್ಲಿ ಮಂಜೂರಾದ 15 ಐಎಸ್‌ಓ

ದೃಢೀಕರಣ ಪತ್ರ ಪಡೆದ ಘಟಕಗಳಿಗೆ ರೂ.8.93,500/–ಗಳ ಪ್ರೋತ್ಸಾಹಧನ ಬಿಡುಗಡೆ ಮಾಡಿರುತ್ತದೆ ಮತ್ತು 2013–14ನೇ ಸಾಲಿನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಡಿ (ಶೇ.50 ರಷ್ಟು ಗರಿಷ್ಠ ರೂ.50 ಲಕ್ಷಗಳು) 3ನೇ ಮತ್ತು 4ನೇ ರಾಜ್ಯ ಮಟ್ಟದ ಸಮಿತಿ ಸಭೆಯಲ್ಲಿ 10 ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳಿಗೆ ರೂ.3.26 ಕೋಟಿ ಅನುದಾನವಾಗಿ ಬಿಡುಗಡೆ ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕ ಶ್ರೀ ಅನಿಲ್ ಅ ಉಪ್ಪಿನ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.